ಕರ್ನಾಟಕ ಸರ್ಕಾರ

ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ದಂಡಾಧಿಕಾರಿಗಳ ಕಾರ್ಯಾಲಯ, ಬೆಳಗಾವಿ

OFFICE OF THE DEPUTY COMMISSIONER AND DISTRICT MAGISTRATE BELAGAVI

Phone: 0831- 2407273 **Email:** deo.belagavi@gmail.com

ನಂ/ಎಂಎಜಿ/ಪಿಒಲ್/ವಿವ-39 /2025-26 **ದಿನಾಂಕ :21 -01-2026**

ವಿಷಯ: ಬೆಳಗಾವಿ ಜಿಲ್ಲೆಯಲ್ಲಿ ನಕಲಿ ವ್ಯಕ್ತಿತ್ವ (Impersonation) ಆಸ್ತಿ ವ್ಯವಹಾರಗಳ ವಂಚನೆಗಳನ್ನು ತಡೆಗಟ್ಟಲು, ಸಾರ್ವಜನಿಕ ಹಾಗೂ ಸರ್ಕಾರಿ ಆಸ್ತಿಗಳ ರಕ್ಷಣೆ, ಸಾರ್ವಜನಿಕ ಶಾಂತಿ ಮತ್ತು ಸುವ್ಯವಸ್ಥೆ ಕಾಪಾಡುವ ಹಾಗೂ ಅಪರಾಧ ತಡೆಗಟ್ಟುವ ಹಿತದೃಷ್ಟಿಯಿಂದ ಆಸ್ತಿ ನೋಂದಣಿ ಸಂದರ್ಭದಲ್ಲಿ ಆಧಾರ್ ದೃಢೀಕರಣವನ್ನು ಬಳಸುವ ಕುರಿತು.

ಉಲ್ಲೇಖ: ಭಾರತೀಯ ನಾಗರಿಕ ಸುರಕ್ಷಾ ಸಂಹಿತಾ (ಬಿ.ಎನ್.ಎಸ್.ಎಸ್), 2023 ಕಲಂ 152(1) ಹಾಗೂ 163 ರ ಪ್ರಕಾರ

*****

ಪ್ರಸ್ತಾವನೆ:

ಬೆಳಗಾವಿ ಜಿಲ್ಲೆಯಲ್ಲಿ **ಆಸ್ತಿ ನೋಂದಣಿ ಪ್ರಕ್ರಿಯೆಯಲ್ಲಿ ನಕಲಿ ವ್ಯಕ್ತಿತ್ವ ಧಾರಣೆ (Impersonation), ನಕಲಿ ದಾಖಲೆಗಳ ಮೂಲಕ ಆಸ್ತಿ ವರ್ಗಾವಣೆ (fraudulent execution of documents), ಸರ್ಕಾರಿ ಹಾಗೂ ಸಾರ್ವಜನಿಕ ಆಸ್ತಿಗಳ ಅನಧಿಕೃತ ನೋಂದಣಿ ಪ್ರಕರಣಗಳು** ಜರುಗುತ್ತಿರುವುದು ಕಂಡು ಬಂದಿರುತ್ತದೆ. ಮತ್ತೊಂದೆಡೆ, ಇಂತಹ ವಂಚನೆ/ನಕಲಿ ದಾಖಲೆ ಆಸ್ತಿ ವ್ಯವಹಾರಗಳಿಂದ **ಭೂ ವಿವಾದಗಳು, ಅಪರಾಧ ಪ್ರಕರಣಗಳು, ಸಾರ್ವಜನಿಕ ಅಶಾಂತಿ, ಕಾನೂನು ಮತ್ತು ಸುವ್ಯವಸ್ಥೆಗೆ ಧಕ್ಕೆ** ಉಂಟಾಗುತ್ತಿರುವುದು ಕಂಡುಬಂದಿರುತ್ತದೆ, ಅಲ್ಲದೆ, ಆಸ್ತಿ ಸಂಬಂಧಿತ ವಂಚನೆಗಳು **ಸಾರ್ವಜನಿಕ ಶಾಂತಿ ಭಂಗ, ಅಪರಾಧ ಚಟುವಟಿಕೆಗಳಿಗೆ ಉತ್ತೇಜನ** ಮಾಡುವ ಸಾಧ್ಯತೆ ಇರುವುದರಿಂದ, **ಆಸ್ತಿ ನೋಂದಣಿ ಹಂತದಲ್ಲಿಯೇ ವ್ಯಕ್ತಿತ್ವ ದೃಢೀಕರಣವನ್ನು ಪರಿಣಾಮಕಾರಿಯಾಗಿ ನಡೆಸುವುದು** ಅಪರಾಧ ತಡೆಗಟ್ಟಲು, ಸರ್ಕಾರಿ ಮತ್ತು ಸಾರ್ವಜನಿಕ ಆಸ್ತಿಗಳ ರಕ್ಷಣೆಗಾಗಿ ಹಾಗೂ ಸಾರ್ವಜನಿಕ ಸುವ್ಯವಸ್ಥೆ ಕಾಪಾಡುವ ಹಿತದೃಷ್ಟಿಯಿಂದ ಅವಶ್ಯವಾಗಿರುತ್ತದೆ. ಆಧಾರ್ ಆಧಾರಿತ ದೃಢೀಕರಣವು **ವ್ಯಕ್ತಿತ್ವದ ಪರಿಶೀಲನೆ, ನಕಲಿ ವ್ಯಕ್ತಿತ್ವ ತಡೆಗಟ್ಟುವಿಕೆ, ವಂಚನಾ ವ್ಯವಹಾರಗಳನ್ನು ತಡೆಯಲು ಸಹಾಯಕವಾಗುತ್ತದೆ. ಪ್ರಯುಕ್ತ ಈ ಕೆಳಗಿನಂತೆ ಆದೇಶಿಸಿದೆ.**

ಆದೇಶ

ಪ್ರಸ್ತಾವನೆಯಲ್ಲಿ ವಿವರಿಸಿದ ಅಂಶಗಳನ್ವಯ., **ಮೊಹಮ್ಮದ ರೋಷನ್, ಭಾ.ಆ.ಸೇ ಜಿಲ್ಲಾ ದಂಡಾಧಿಕಾರಿ ಬೆಳಗಾವಿ ಜಿಲ್ಲೆ, ಬೆಳಗಾವಿ** ಆದ ನಾನು **ಭಾರತೀಯ ನಾಗರಿಕ ಸುರಕ್ಷಾ ಸಂಹಿತಾ (ಬಿ.ಎನ್.ಎಸ್.ಎಸ್), 2023 ಕಲಂ 152 (1) ಹಾಗೂ 163 ರಡಿ** ಸಾರ್ವಜನಿಕ ಸುವ್ಯವಸ್ಥೆಯ ಹಿತದೃಷ್ಟಿಯಿಂದ ನನಗೆ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ ಈ ಕೆಳಗಿನಂತೆ ಆದೇಶಿಸಿರುತ್ತೇನೆ.

1) **ನಕಲಿ ವ್ಯಕ್ತಿತ್ವ ಮತ್ತು ವಂಚನೆ ತಡೆಗಟ್ಟಲು ಸರ್ಕಾರಿ ಮತ್ತು ಸಾರ್ವಜನಿಕ ಆಸ್ತಿಗಳ ರಕ್ಷಣೆಗಾಗಿ, ಆಸ್ತಿ ಸಂಬಂಧಿತ ಅಪರಾಧಗಳನ್ನು ತಡೆಯಲು, ಸಾರ್ವಜನಿಕ ಶಾಂತಿ ಮತ್ತು ಸುವ್ಯವಸ್ಥೆ ಕಾಪಾಡಲು, ಅಪರಾಧ ತಡೆ ಮತ್ತು ಸಾರ್ವಜನಿಕ ಸುರಕ್ಷತೆಗಾಗಿ** ತಕ್ಷಣದಿಂದ ಜಾರಿಗೆ ಬರುವಂತೆ, ಬೆಳಗಾವಿ ಜಿಲ್ಲೆಯ **ಎಲ್ಲಾ ಉಪ-ನೋಂದಣಾಧಿಕಾರಿಗಳ ಕಚೇರಿಗಳಲ್ಲಿ** ನಡೆಯುವ **ಆಸ್ತಿ ನೋಂದಣಿ ಪ್ರಕ್ರಿಯೆಯಲ್ಲಿ, ನೋಂದಣಿಗೆ ಸಂಬಂಧಿಸಿದ ಎಲ್ಲಾ ಪಕ್ಷಗಾರರಾದ ಖರೀದಿದಾರರು, ಮಾರಾಟಗಾರರು, ದಾನಿಗಳು, ಸ್ವೀಕರಿಸುವವರು ಹಾಗೂ ಸರ್ಕಾರದಿಂದ ನೇಮಿಸಿರುವ ಅಧಿಕಾರಿಗಳು ಹಾಗೂ ಇನ್ನಿತರೆ ವ್ಯವಹಾರಗಳಿಗೆ ಸಂಬಂಧಿಸಿದ** ಎಲ್ಲಾ ವ್ಯಕ್ತಿಗಳ ಆಧಾರ್ ಆಧಾರಿತ ದೃಢೀಕರಣವನ್ನು ಕಡ್ಡಾಯವಾಗಿ ನಡೆಸತಕ್ಕದ್ದು.

2..

2) **ಜಿಪಿಎ(Power of attorney) ಗೆ** ಸಂಬಂಧಿಸಿದಂತೆ ಕಡ್ಡಾಯವಾಗಿ ನೋಂದಣಿಯಾಗಿರುವ ಜಿಪಿಎಗಳನ್ನು ಮಾತ್ರ ಪರಿಗಣಿಸಬೇಕು ಹಾಗೂ ಕಡ್ಡಾಯವಾಗಿ ಜಿಪಿಎ ನೀಡಿರುವವರ ಜೀವಿತ ಪ್ರಮಾಣಪತ್ರವನ್ನು ಸಂಬಂಧಪಟ್ಟ ಕಂದಾಯ ಅಧಿಕಾರಿಗಳಿಂದ ಪಡೆಯತಕ್ಕದ್ದು.

3) ನೋಂದಣಿ ಮತ್ತು ಮುದ್ರಾಂಕ ಇಲಾಖೆಯ **ಎಲ್ಲಾ ಉಪ-ನೋಂದಣಾಧಿಕಾರಿಗಳು, ಸಿಬ್ಬಂದಿ ಹಾಗೂ ಸಂಬಂಧಿಸಿದ ಇತರೆ ಅಧಿಕಾರಿಗಳು** ಈ ಆದೇಶವನ್ನು ಕಟ್ಟುನಿಟ್ಟಾಗಿ ಪಾಲಿಸಿ, ನೋಂದಣಿಗೆ ಮುನ್ನ ಆಧಾರ್ ದೃಢೀಕರಣವನ್ನು ಖಚಿತಪಡಿಸಿಕೊಳ್ಳಬೇಕು.

4) **ಬೆಳಗಾವಿ ನಗರದ ಪೊಲೀಸ್ ಆಯುಕ್ತರು ಹಾಗೂ ಜಿಲ್ಲೆಯ ಪೊಲೀಸ್ ವರಿಷ್ಠಾಧಿಕಾರಿಗಳು** ಈ ಆದೇಶದ ಅನುಷ್ಠಾನಕ್ಕೆ ಅಗತ್ಯ ಪೊಲೀಸ್ ಸಹಕಾರ ಒದಗಿಸಬೇಕು.

5) **ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು, ಜಿಲ್ಲಾ ಪಂಚಾಯತ ಬೆಳಗಾವಿ, ಆಯುಕ್ತರು, ಬೆಳಗಾವಿ ಮಹಾನಗರ ಪಾಲಿಕೆ, ಯೋಜನಾ ನಿರ್ದೇಶಕರು, ಜಿಲ್ಲಾ ನಗರಾಭಿವೃದ್ಧಿ ಕೋಶ ಬೆಳಗಾವಿ, ಆಯುಕ್ತರು, ಬೆಳಗಾವಿ ನಗರಾಭಿವೃದ್ಧಿ ಪ್ರಾಧಿಕಾರ ಬೆಳಗಾವಿ, ಕಾರ್ಯನಿರ್ವಾಹಕ ಅಭಿಯಂತರರು ಕೆ.ಎಚ್.ಬಿ ಬೆಳಗಾವಿ, ಜಿಲ್ಲೆಯ ಎಲ್ಲಾ ಉಪವಿಭಾಗಾಧಿಕಾರಿಗಳು, ತಹಶೀಲ್ದಾರರು. ತಾಲೂಕು ಪಂಚಾಯತಿ ಕಾರ್ಯನಿರ್ವಹಣಾಧಿಕಾರಿಗಳು ಮತ್ತು ಇತರೆ ಕಂದಾಯ ಇಲಾಖೆಯ ಅಧಿಕಾರಿಗಳು** ಅಗತ್ಯವಿರುವ ಸ್ಥಳಗಳಲ್ಲಿ ಸಮನ್ವಯ ಸಾಧಿಸಬೇಕು, ಈ ಆದೇಶವನ್ನು ಸಾರ್ವಜನಿಕ ಹಿತದೃಷ್ಟಿಯಿಂದ ಹೊರಡಿಸಲಾಗಿದ್ದು, ವ್ಯಾಪಕ ಪ್ರಚಾರಕ್ಕೆ ಒಳಪಡಿಸಬೇಕು.

ಈ ಆದೇಶವನ್ನು ಉಲ್ಲಂಘಿಸಿದ್ದಲ್ಲಿ ಕಾನೂನು ಪ್ರಕಾರ ಕ್ರಮ ಕೈಗೊಳ್ಳಲಾಗುವುದು.

DISTRICT MAGISTRATE ಜಿಲ್ಲಾ ದಂಡಾಧಿಕಾರಿ ಬೆಳಗಾವಿ BELAGAVI

(ಮೊಹಮ್ಮದ ರೋಷನ್, ಭಾ.ಆ.ಸೇ)
ಜಿಲ್ಲಾ ದಂಡಾಧಿಕಾರಿ,
ಬೆಳಗಾವಿ ಜಿಲ್ಲೆ, ಬೆಳಗಾವಿ.

ಪ್ರತಿಯನ್ನು ಮಾಹಿತಿ ಹಾಗೂ ಅವಶ್ಯಕ ಕ್ರಮಕ್ಕಾಗಿ:-

1. ಪೊಲೀಸ್ ಆಯುಕ್ತರು, ಬೆಳಗಾವಿ ನಗರ, ಬೆಳಗಾವಿ.
2. ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು, ಜಿಲ್ಲಾ ಪಂಚಾಯತ ಬೆಳಗಾವಿ.
3. ಪೊಲೀಸ್ ವರಿಷ್ಠಾಧಿಕಾರಿಗಳು, ಬೆಳಗಾವಿ ಜಿಲ್ಲೆ, ಬೆಳಗಾವಿ.
4. ಆಯುಕ್ತರು, ಬೆಳಗಾವಿ ಮಹಾನಗರ ಪಾಲಿಕೆ.
5. ಆಯುಕ್ತರು, ಬೆಳಗಾವಿ ನಗರಾಭಿವೃದ್ಧಿ ಪ್ರಾಧಿಕಾರ,ಬೆಳಗಾವಿ.
6. ಜಿಲ್ಲಾ ನೋಂದಣಾಧಿಕಾರಿಗಳು, ನೋಂದಣಿ ಮತ್ತು ಮುದ್ರಾಂಕ ಇಲಾಖೆ, ಬೆಳಗಾವಿ.
7. ಯೋಜನಾ ನಿರ್ದೇಶಕರು, ಜಿಲ್ಲಾ ನಗರಾಭಿವೃದ್ಧಿ ಕೋಶ, ಬೆಳಗಾವಿ.
8. ಕಾರ್ಯನಿರ್ವಾಹಕ ಅಭಿಯಂತರರು, ಕೆ.ಎಚ್.ಬಿ, ಬೆಳಗಾವಿ.
9. ಜಿಲ್ಲೆಯ ಎಲ್ಲಾ ಉಪವಿಭಾಗಾಧಿಕಾರಿಗಳು.
10. ಜಿಲ್ಲೆಯ ಎಲ್ಲಾ ತಹಶೀಲದಾರರು.
11. ಜಿಲ್ಲೆಯ ಎಲ್ಲಾ ತಾಲೂಕು ಪಂಚಾಯತಿ ಕಾರ್ಯನಿರ್ವಾಹಣಾಧಿಕಾರಿಗಳು.
12. ಜಿಲ್ಲೆಯ ಎಲ್ಲಾ ಉಪನೋಂದಣಾಧಿಕಾರಿಗಳು.
13. ಉಪನಿರ್ದೇಶಕರು, ವಾರ್ತಾ ಮತ್ತು ಸಾರ್ವಜನಿಕ ಪ್ರಚಾರ ಇಲಾಖೆ ಬೆಳಗಾವಿ

- ಈ ಆದೇಶವನ್ನು ಜಿಲ್ಲೆಯ ಪ್ರಮುಖ ಪತ್ರಿಕೆಗಳಲ್ಲಿ ಸುದ್ದಿ ರೂಪದಲ್ಲಿ ಪ್ರಕಟಿಸಲು ತಿಳಿಸಿದೆ.

ಅಪರ ಜಿಲ್ಲಾ ದಂಡಾಧಿಕಾರಿ,
ಬೆಳಗಾವಿ ಜಿಲ್ಲೆ, ಬೆಳಗಾವಿ.